ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರುವ ಬಗ್ಗೆ

ಡಾ|| ಚಂದ್ರಶೇಖರ ಬಿ ಪಾಟೀಲ್(ಪದವೀಧರ ಕ್ಷೇತ್ರ) –

19 (81) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ನಿಧನ ಮುಂತಾದ ಕಾರಣಗಳಿಂದ ಖಾಲಿ ಇರುವ ಬೋಧಕೇತರ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡದಿರಲು ಕಾರಣವೇನು;

(ಆ) ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ನಿಧನ, ಮುಂತಾದ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡುವಾಗ ಕಾಲೇಜುನ್ನು ಒಂದು ಘಟಕವನ್ನಾಗಿ ಪರಿಗಣಿಸದೆ ವಿಷಯ/ವಿಭಾಗವನ್ನು ಒಂದು ಘಟಕವನ್ನಾಗಿ ಪರಿಗಣಿಸಿ ಮೀಸಲಾತಿಯನ್ನು ನಿಗಧಿಪಡಿಸುವುದರಿಂದ ಸಾಮಾಜಿಕ ಅನ್ಯಾಯ ಆಗುತ್ತಿಲ್ಲವೆ;

(ಇ) ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಾವಧಿ ಪ್ರಾಂಶುಪಾಲರ ನೇಮಕಾತಿ ಮಾಡಲಾಗುವುದು ಯಾವಾಗ;

(ಈ) ರಾಜ್ಯದ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ನಿಧನರಾದ ಸಿಬ್ಬಂದಿಗಳ ಅವಲಂಬಿತರಿಗೆ/ಕುಟುಂಬಸ್ತರಿಗೆ ಅನುಕಂಪದ ಆಧಾರದ ಮೇಲೆ ನೀಡುವ ಸೇವಾ ಸೌಲಭ್ಯ ಸ್ಥಗಿತಗೊಳಿಸಿರುವುದರಿಂದ ಅಂತಹ ಕುಟುಂಬಗಳು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?